0|C

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕೆ.ರಾಮಪ್ಪ, ಅಧ್ಯಕ್ಷರು, ಮತ್ತೋಡು ಗ್ರಾಮ ಪಂಚಾಯಿತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ರವರ ಪತ್ರ ಸಂಖ್ಯೆ:ಸಂ/ಜಿಪಂ/ಆ(9)ಮಗಾರಾಗ್ರಾಉಖಾಯೋ/ಸಿಆರ್-264/2016-17, ದಿನಾಂಕ:07-01-2017.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:13-03-2017ರ ಕಾರಣ ಕೇಳುವ ನೋಟೀಸು.
3. ಶ್ರೀ ಕೆ.ರಾಮಪ್ಪ, ಅಧ್ಯಕ್ಷರು, ಮತ್ತೋಡು ಗ್ರಾಮ ಪಂಚಾಯಿತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ದಿನಾಂಕ:22-03-2017ರ ಲಿಖಿತ ಹೇಳಿಕೆ.
4. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್ ದಿನಾಂಕ:19-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:07-01-2017ರ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ ರವರ ಪ್ರಸ್ತಾವನೆಯಲ್ಲಿ ಹೊಸದುರ್ಗ ತಾಲ್ಲೂಕು ಮತ್ತೋಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ 2014-15 ಮತ್ತು 2015-16ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಅನುಷ್ಠಾನಗೊಂಡ ಈ ಕೆಳಕಂಡ ಕಾಮಗಾರಿಗಳಲ್ಲಿ ಅವ್ಯವಹಾರ ಮತ್ತು ಹಣ ದುರುಪಯೋಗವಾಗಿದ್ದು, ಶಿಸ್ತು ಕ್ರಮ ಜರುಗಿಸುವ ಬಗ್ಗೆ ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹೊಸದುರ್ಗ ರವರು ತನಿಖಾ ವರದಿಯೊಂದಿಗೆ ದೂರಿನ ವರದಿಯನ್ನು ಸಲ್ಲಿಸಿರುತ್ತಾರೆ.

1) ಮತ್ತೋಡು ಗ್ರಾಮದ ಅರೆಹಳ್ಳಿ ರಸ್ತೆ ಎಡ ಭಾಗದಲ್ಲಿರುವ ಕೊಳವೆ ಬಾವಿ ಅಂತರ್‌ಜಲ ಕಾಮಗಾರಿ ಸಾಮಗ್ರಿ ಮೊತ್ತ ರೂ.26,672/-.
2) ಮತ್ತೋಡು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಹತ್ತಿರವಿರುವ ಕೊಳವೆ ಬಾವಿ ಅಂತರ್‌ಜಲ ಕಾಮಗಾರಿ ಸಾಮಗ್ರಿ ಮೊತ್ತ ರೂ.27,505/-.
3) ಅರೆಹಳ್ಳಿ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಶಾಲೆ ಸುತ್ತ ತಡೆಗೋಡೆ ನಿರ್ಮಾಣ ಕಾಮಗಾರಿ ಸಾಮಗ್ರಿ ಮೊತ್ತ ರೂ.1,58,300/-.

ಈ ಮೇಲಿನ 3 ಕಾಮಗಾರಿಗಳಿಗೆ ಎರಡು ಬಾರಿ ಅಕ್ರಮವಾಗಿ ಹಣ ಪಾವತಿ ಮಾಡಿರುವುದು ಸಹಾಯಕ ಲೆಕ್ಕಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಹೊಸದುರ್ಗ ಇವರ ಲೆಕ್ಕ ತಪಾಸಣಾ ವರದಿ ಹಾಗೂ MIS ವರದಿಯಲ್ಲಿ ಸಾಬೀತಾಗಿರುತ್ತದೆ.

ಸದರಿ ಪ್ರಕರಣವು ಹಣ ದುರುಪಯೋಗ/ಅನ್ಯ ವ್ಯಕ್ತಿಗೆ ಅಥವಾ ಸಂಸ್ಥೆಗೆ ದುರ್ಲಾಭ/ಯೋಜನೆಗೆ ನಷ್ಟವಾಗಬೇಕೆಂಬ ದುರುದ್ದೇಶದಿಂದ ಮಾಡಿದ ಕೃತ್ಯವಾಗಿದ್ದು, ಕಾರ್ಯನಿರ್ವಾಹಕಾಧಿಕಾರಿಯವರ ಶಿಫಾರಸ್ಸಿನಂತೆ ಶ್ರೀ ಕೆ.ರಾಮಪ್ಪ, ಅಧ್ಯಕ್ಷರು, ಮತ್ತೋಡು ಗ್ರಾಮ ಪಂಚಾಯಿತಿ ಇವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 48(4) ಮತ್ತು 48(5) ರಂತೆ ಅಧ್ಯಕ್ಷ ಸ್ಥಾನ/ಸದಸ್ಯತ್ವ ಸ್ಥಾನದಿಂದ ಅನರ್ಹಗೊಳಿಸುವಂತೆ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ಮತ್ತು 48(4) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕುವ ಬಗ್ಗೆ ಶ್ರೀ ಕೆ.ರಾಮಪ್ಪ, ಅಧ್ಯಕ್ಷರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

2..

ಈ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಸಲ್ಲಿಸಿರುವ ಉತ್ತರದಲ್ಲಿ ಸದರಿ ಕಾಮಗಾರಿಯು ನನ್ನ ಅವಧಿಯಲ್ಲಿ ನಡೆದಿರುವುದಿಲ್ಲ, ಅಲ್ಲದೇ ನಾನು ಎಂ.ಐ.ಎಸ್ ಮಾಡುವಾಗ ನನ್ನ ಹೆಬ್ಬೆಟ್ಟನ್ನು ಸಹ ನೀಡಿರುವುದಿಲ್ಲ. ಆದರೆ ನನಗೆ ಸದರಿ ಕಾಮಗಾರಿಯ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಯಾವುದೇ ಮಾಹಿತಿ ನೀಡದೆ ನಮ್ಮ ಗ್ರಾಮ ಪಂಚಾಯತಿಯಲ್ಲಿ ಸಾಮಗ್ರಿ ಬಿಲ್ಲುಗಲನ್ನು ಪಾವತಿ ಮಾಡುವುದು ಬಾಕಿ ಇದೆ. ತಕ್ಷಣ ಪಾವತಿ ಮಾಡಬೇಕಾಗಿದೆ ಎಂದು ತಿಳಿಸಿ ಯಾವುದೇ ಕಾಮಗಾರಿಯ ಕಡತವನ್ನು ತೋರಿಸದೆ ನನ್ನ ಹೆಬ್ಬಟ್ಟಿನ ಗುರುತನ್ನು ಹಾಗೂ ಡಾಂಗಲ್ ನೀಡುವಂತೆ ತಿಳಿಸಿರುತ್ತಾರೆ. ನಾನು ಕೇವಲ 3ನೇ ತರಗತಿ ಓದಿರುತ್ತೇನೆ. ಸಾಮಗ್ರಿಗಳನ್ನು ಸರಬರಾಜು ಮಾಡಿದ ವೆಂಡರ್ ಶ್ರೀ ಉಮೇಶ್‌ರವರು ಒಂದೇ ಕಾಮಗಾರಿಗೆ ಎರಡು ಬಾರಿ ಪಾವತಿಯಾದ ಹೆಚ್ಚುವರಿ ಮೊತ್ತ ರೂ.1,58,300/-ಗಳ ಸಾಮಗ್ರಿ ಬಿಲ್ಲಿನ ಮೊತ್ತದ ಡಿ.ಡಿ.ಯನ್ನು ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹೊಸದುರ್ಗ ಕಛೇರಿಗೆ ನೀಡಿರುವುದರಿಂದ ಸದರಿ ಪ್ರಕರಣದಿಂದ ಮುಕ್ತಾಗೊಳಿಸುವಂತೆ ಪ್ರಾರ್ಥಿಸುತ್ತೇನೆ ಎಂದು ಸಮಜಾಯಿಷಿ ನೀಡಿರುತ್ತಾರೆ.

ಮೇಲೆ ಓದಲಾದ (4)ರನ್ವಯ ಶ್ರೀ ಕೆ.ರಾಮಪ್ಪ, ಅಧ್ಯಕ್ಷರು ಇವರ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿ:08.06.2017 ರಂದು ಜರುಗಿದ ವಿಚಾರಣೆಯಲ್ಲಿ ಶ್ರೀ ದೇವರಾಜು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಪಾದಿತ ಅಧ್ಯಕ್ಷರು, ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಹೊಸದುರ್ಗ ಹಾಗೂ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ರವರುಗಳು ಹಾಜರಿದ್ದರು. ಅಧ್ಯಕ್ಷರು ತಮ್ಮ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, 2014-15 ಮತ್ತು 2015-16ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹಣದುರುಪಯೋಗ ಮಾಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ಮತ್ತು 48(4) ರನ್ವಯ ಮತ್ತೋಡು ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವ ರದ್ದುಪಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 186 ಗ್ರಾಪಂಅ 2017 ಬೆಂಗಳೂರು, ದಿನಾಂಕ:09-02-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ರಾಮಪ್ಪ, ಅಧ್ಯಕ್ಷರು, ಮತ್ತೋಡು ಗ್ರಾಮ ಪಂಚಾಯಿತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರು 2014-15 ಮತ್ತು 2015-16ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹಣದುರುಪಯೋಗ ಮಾಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ಮತ್ತು 48(4) ರನ್ವಯ ಮತ್ತೋಡು ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವ ರದ್ದುಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

9/2/18

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.
4. ಶ್ರೀ ಕೆ.ರಾಮಪ್ಪ, ಅಧ್ಯಕ್ಷರು, ಮತ್ತೋಡು ಗ್ರಾಮ ಪಂಚಾಯಿತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮತ್ತೋಡು ಗ್ರಾಮ ಪಂಚಾಯಿತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
6. ಗಣಕ ಶಾಖೆ/ಕರ್ನಾಟಕ ವಿಕಾಸ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

6

ಹೊರಡಿಸಿದೆ 14/2
ದಿನಾಂಕ
ಗ್ರಾಮೀಣಾಭಿವೃದ್ಧಿ ... ಪಂ. ರಾಜ್ ಇಲಾಖೆ